# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 38 |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | 08-12-2025 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ವಿಧಾನಸಭಾ ಕ್ಷೇತ್ರದಲ್ಲಿ ತಾಲ್ಲೂಕಿನ ವಿದ್ಯಾರ್ಥಿಗಳು ಡಿಪ್ಲೋಮೋ ಶಿಕ್ಷಣಕ್ಕಾಗಿ 90-100 ಕಿ.ಮೀ ದೂರದ ರಾಯಚೂರು ಹಾಗೂ ಕೊಪ್ಪಳ ನಗರಕ್ಕೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಹೌದು.<br><br>ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕಿನಲ್ಲಿ ಡಿಪ್ಲೋಮೋ ಕಾಲೇಜನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಸರ್ಕಾರವು ಸಿಂಧನೂರು ತಾಲ್ಲೂಕಿಗೆ ಹೊಸ ಡಿಪ್ಲೋಮೋ ಕಾಲೇಜನ್ನು ಮಂಜೂರು ಮಾಡುವುದು? | ಉನ್ನತ ಶಿಕ್ಷಣ ಇಲಾಖೆಗೆ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನದಲ್ಲಿ ಅಭಿವೃದ್ಧಿಗಾಗಿ ಸೀಮಿತ ಅನುದಾನ ಲಭ್ಯವಿರುತ್ತದೆ. ಸದರಿ ಅನುದಾನದಲ್ಲಿ ಪ್ರಸ್ತುತ ಇರುವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಬಲವರ್ಧನೆಗೊಳಿಸಲಾಗುತ್ತಿದೆ.<br><br>ಸಿಂಧನೂರು ತಾಲ್ಲೂಕಿನಲ್ಲಿ ಸರ್ಕಾರಿ ಡಿಪ್ಲೋಮಾ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ. |

ಕಡತ ಸಂಖ್ಯೆ: ಇಡಿ 157 ಹೆಚ್‌ಪಿಟಿ 2025

(ಡಾ|| ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು